**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 17/2024**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.04**

**ದಿನಾಂಕಃ** 09.01.2026 **ಸಿಡಬ್ಲ್ಯೂ.05**

| | |
|---|---|
| ಹೆಸರು | ಸತೀಶ |
| ತಂದೆ ಹೆಸರು | ಹೊನ್ನಪ್ಪ |
| ವಯಸ್ಸು | 51 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸ ಸ್ಥಳ | ನಿಟ್ಟೂರು |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.1 ರವರ ಪರಿಚಯವಿಲ್ಲ. ಚಾಸಾ.4 ರವರ ಪರಿಚಯವಿದೆ. ಆರೋಪಿತರ ಪರಿಚಯವಿಲ್ಲ. ಪ್ರಕರಣದ ಬಗ್ಗೆ ನನಗೆ ಮಾಹಿತಿ ಇಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ಈಗ್ಗೆ 10 ವರ್ಷಗಳ ಹಿಂದೆ ಚಾಸಾ.1 ರವರಿಗೆ 2 ನೇ ಆರೋಪಿಯ ಮಗಳು ಸ್ವಾತಿ ಅವರನ್ನು ಮದುವೆ ಮಾಡಿಕೊಟ್ಟಿದ್ದು ಸದರಿಯವರಿಗೆ ಶೃತಿ ಎಂಬ ಮಗಳು ಇದ್ದಳು ಎಂದರೆ ನನಗೆ ಗೊತ್ತಿಲ್ಲ. ಸದರಿ ಶೃತಿ ಅನಾರೋಗ್ಯದಿಂದ ಬಳಲುತ್ತಿದ್ದಳು ಎಂದರೆ ನನಗೆ ಗೊತ್ತಿಲ್ಲ. ಸ್ವಾತಿ ಮತ್ತು ದಿಲೀಪ ರವರಿಗೆ ಸಂಸಾರದಲ್ಲಿ ಜಗಳ ಇತ್ತು ಎಂದರೆ ನನಗೆ ಗೊತ್ತಿಲ್ಲ. ದಿಃ 15.06.2023 ರಂದು ಸಂಜೆ 5.00 ಗಂಟೆಗೆ ತನ್ನ ಮಗಳನ್ನು ನೋಡಿಕೊಂಡು ಬರಲು ಸ್ವಾತಿ ರವರ ಮನೆಗೆ ಹೋಗಿದ್ದರು ಎಂದರೆ ನನಗೆ ಗೊತ್ತಿಲ್ಲ. ಸದರಿ ಸಂದರ್ಭದಲ್ಲಿ ಆರೋಪಿತರು ಚಾಸಾ.1 ದಿಲೀಪ ರವರಿಗೆ ಅಡ್ಡಗಟ್ಟಿ ಅವಾಚ್ಯ ಶಬ್ದಗಳಿಂದ ಬೈದು ತಮ್ಮ ಕೈಕಾಲುಗಳಿಂದ ಆತನನ್ನು ಹೊಡೆದು ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಈ ಎಲ್ಲಾ ವಿಚಾರವಾಗಿ ನಾನು ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಗುರುತಿಸಲು ನಿರಾಕರಿಸಿದ ಹೇಳಿಕೆಯನ್ನು ನಿಪಿ.7 ಎಂದು ಗುರುತಿಸಲಾಯಿತು.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ